Akashvani : Bangalore
Regional Bulletin In Kannada
18.09.2026 / 18.40 hrs
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

## ಮುಖ್ಯಾಂಶಗಳು

<>><><*><><<>

- ತುಳು ಭಾಷೆಗೆ ರಾಜ್ಯದ ಎರಡನೇ ಅಧಿಕೃತ ಭಾಷಾ ಮಾನ್ಯತೆ; ಸಚಿವ ಸಂಪುಟ ಸಭೆಯಲ್ಲಿ ಮಹತ್ವದ ನಿರ್ಧಾರ
- ಕರ್ನಾಟಕ ಕಡಲ ಜೈವಿಕ ತಂತ್ರಜ್ಞಾನ ನೀತಿ-೨೦೨೬-೨೦೩೧ಕ್ಕೆ ಸಂಪುಟ ಸಭೆಯಲ್ಲಿ ಅನುಮೋದನೆ
- ಭಾರತೀಯ ವಾಯುಪಡೆಗೆ ಎಚ್‌ಎಎಲ್ ನಿರ್ಮಿತ ಲಘು ಯುದ್ಧ ವಿಮಾನ, ಹೆಲಿಕಾಪ್ಟರ್ ಹಸ್ತಾಂತರಿಸಿದ ರಕ್ಷಣಾ ಸಚಿವ ರಾಜನಾಥ್ ಸಿಂಗ್
- ಜೀವ ವೈವಿಧ್ಯದ ಸಂರಕ್ಷಣೆ, ಸುಸ್ಥಿರ ಬಳಕೆ ವಿಕಸಿತ ಭಾರತದ ಭವಿಷ್ಯಕ್ಕೆ ನಿರ್ಣಾಯಕ - ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅಭಿಮತ
- ಹುಬ್ಬಳ್ಳಿಯಲ್ಲಿ ನಾಳೆ ಖಾಸಗಿ ಆಸ್ಪತ್ರೆ ಲೋಕಾರ್ಪಣೆಗೊಳಿಸಲಿರುವ ಕೇಂದ್ರ ಗೃಹ ಸಚಿವ ಅಮಿತ್ ಶಾ

<>><><*><><<>

ರಾಜ್ಯದ ಎರಡನೇ ಹೆಚ್ಚುವರಿ ಭಾಷೆಯನ್ನಾಗಿ ತುಳು ಭಾಷೆಯನ್ನು ಘೋಷಿಸಲಾಗಿದೆ. ಮಂಗಳೂರಿನಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅಧ್ಯಕ್ಷತೆಯಲ್ಲಿ ನಡೆದ ಸಂಪುಟ ಸಭೆಯಲ್ಲಿ ಈ ಮಹತ್ವದ ನಿರ್ಧಾರ ಕೈಗೊಳ್ಳಲಾಗಿದೆ. ಈ ಮೂಲಕ ತುಳು ಭಾಷಿಕರ ಹಲವು ದಶಕಗಳ ಹೋರಾಟಕ್ಕೆ ಜಯ ದೊರೆತಿದೆ. ಸಂಪುಟ ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಪಂಚ ದ್ರಾವಿಡ ಭಾಷೆಗಳಲ್ಲಿ ಒಂದಾಗಿರುವ ತುಳು ಭಾಷೆಯು, ಪ್ರಾಚೀನ ಹಾಗೂ ಆಧುನಿಕ, ಸಾಹಿತ್ಯಿಕ, ಸಮೃದ್ಧತೆಯನ್ನು ಹೊಂದಿರುವ ಅಪೂರ್ವ ಭಾಷೆಯಾಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

****ಧ್ವನಿ****ಮುಖ್ಯಮಂತ್ರಿ

ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರಿನಲ್ಲಿ ೫೪೯.೭೯ ಕೋಟಿ ರೂಪಾಯಿ ವೆಚ್ಚದಲ್ಲಿ ವೈದ್ಯಕೀಯ ಕಾಲೇಜು ಸ್ಥಾಪನೆಗೆ ಅನುಮೋದನೆ ದೊರೆತಿದೆ. ಉಡುಪಿ, ಉತ್ತರ ಕನ್ನಡ, ದಕ್ಷಿಣ ಕನ್ನಡ ಜಿಲ್ಲೆಯನ್ನು ಒಳಗೊಂಡಂತೆ ಮಲೆನಾಡು ಕರ್ನಾಟಕ ಪ್ರವಾಸೋದ್ಯಮ ನೀತಿ-೨೦೧೯ಕ್ಕೆ ಸಂಪುಟ ಹಸಿರುನಿಶಾನೆ ತೋರಿದೆ.  ಮುಖ್ಯಮಂತ್ರಿ ಅಧ್ಯಕ್ಷತೆಯಲ್ಲಿ ರಾಜ್ಯ ಪ್ರವಾಸೋದ್ಯಮ ಮಂಡಳಿ ಸ್ಥಾಪನೆ, ಹೂಡಿಕೆದಾರರ ಅನುಕೂಲಕ್ಕಾಗಿ ಪ್ರವಾಸೋದ್ಯಮ ಹೂಡಿಕೆ ಸಹಾಯ ಕೇಂದ್ರಗಳು ಮತ್ತು ಏಕಗವಾಕ್ಷಿ ವ್ಯವಸ್ಥೆಗಳನ್ನು ಜಾರಿಗೆ ತರಲು ನಿರ್ಧರಿಸಲಾಗಿದೆ. ೫೦೦ ಕೋಟಿ ರೂಪಾಯಿ ವೆಚ್ಚದಲ್ಲಿ ಈ ನೀತಿಯ ಅನುಷ್ಠಾನ ಮಾಡಲಾಗುತ್ತಿದೆ. ಕರಾವಳಿ ಜಿಲ್ಲೆಗಳ ದ್ವೀಪಗಳ ಅಭಿವೃದ್ಧಿ ಉದ್ದೇಶದಿಂದ ದಕ್ಷಿಣ ಕನ್ನಡ, ಉಡುಪಿ ಜಿಲ್ಲೆಗಳಲ್ಲಿ ಒಟ್ಟು ೧೨ ದ್ವೀಪಗಳನ್ನು ಅಭಿವೃದ್ಧಿಪಡಿಸಲು ಸಂಪುಟ ಅನುಮೋದನೆ ನೀಡಿದೆ. ಕಾರವಾರ ವಿಮಾನ ನಿಲ್ದಾಣವನ್ನು ೨೫೦.೫ ಕೋಟಿ ರೂಪಾಯಿ ವೆಚ್ಚದಲ್ಲಿ ಅಭಿವೃದ್ಧಿಗೊಳಿಸಲು ಆಡಳಿತಾತ್ಮಕ ಅನುಮೋದನೆ ದೊರೆತಿದೆ. ಮಂಗಳೂರು ಮೀನುಗಾರಿಕಾ ಕಾಲೇಜಿನ ವಿದ್ಯಾರ್ಥಿಗಳ ಸಂಖ್ಯೆಯನ್ನು ೬೦ ರಿಂದ ೨೦೦ಕ್ಕೆ ಹೆಚ್ಚಿಸಲು ನಿರ್ಧರಿಸಲಾಗಿದೆ. ಮಂಕಿ ಬಂದರಿನ ಬಹು ಉಪಯೋಗಿ ಬಂದರು ಮತ್ತು ಹಡಗು ನಿರ್ಮಾಣ ಕೇಂದ್ರ ಅಭಿವೃದ್ಧಿ ಹಾಗೂ ಗಂಗೊಳ್ಳಿಯಲ್ಲಿ ಹಡಗುಗಳ ನಿರ್ಮಾಣ ಅಂಗಳ ಅಭಿವೃದ್ಧಿಗೂ ಹಸಿರುನಿಶಾನೆ ದೊರೆತಿದೆ.

<>><><*><><<>

ಕರ್ನಾಟಕ ಕಡಲ ಜೈವಿಕ ತಂತ್ರಜ್ಞಾನ ನೀತಿ-೨೦೨೬ - ೨೦೩೧ಕ್ಕೆ ಸಚಿವ ಸಂಪುಟ ಅನುಮೋದನೆ ನೀಡಿದೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ೨೦೩೧ರ ವೇಳೆಗೆ ಬ್ಲೂ ಬಯೋ ಆರ್ಥಿಕತೆ ವಿಸ್ತರಿಸುವ ಗುರಿ ಹೊಂದಲಾಗಿದೆ. ಸಮುದ್ರ ಸಂಪನ್ಮೂಲಗಳನ್ನು ಸೌಂದರ್ಯ ವರ್ಧಕಗಳು, ಔಷಧೀಯ ಉತ್ಪನ್ನಗಳು, ಜೈವಿಕ ಗೊಬ್ಬರ ಹಾಗೂ ಉನ್ನತ ಮೌಲ್ಯದ ಉತ್ಪನ್ನಗಳಾಗಿ ಪರಿವರ್ತಿಸುವ ಮೂಲಕ ಕರಾವಳಿ ಆರ್ಥಿಕತೆಯಲ್ಲಿ ಹೆಚ್ಚಿನ ಮೌಲ್ಯವರ್ಧನೆ ಸಾಧಿಸುವುದು ನೀತಿಯ ಪ್ರಮುಖ ಉದ್ದೇಶವಾಗಿದೆ ಎಂದು ಪತ್ರಿಕಾ ಪ್ರಕಟಣೆ ಮೂಲಕ ಮಾಹಿತಿ ನೀಡಿದ್ದಾರೆ. ಈ ನೀತಿಯ ಅನುಷ್ಠಾನದ ಮೂಲಕ ರಾಜ್ಯದಲ್ಲಿ ೧೦ ಸಾವಿರಕ್ಕೂ ಹೆಚ್ಚು ಉದ್ಯೋಗಾವಕಾಶ ಸೃಷ್ಟಿಯಾಗುವ ನಿರೀಕ್ಷೆ ಇದೆ ಎಂದು ತಿಳಿಸಿದ್ದಾರೆ.  ಇದೇ ವೇಳೆ ಮಂಗಳೂರು ನೂತನ ಕೇಂದ್ರ ಕಾರಾಗೃಹದ ಮುಖ್ಯ ಗೋಡೆ ನಿರ್ಮಾಣಕ್ಕೆ ಹತ್ತು ಕೋಟಿ ರೂಪಾಯಿ ಅಂದಾಜು ವೆಚ್ಚದಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

<>><><*><><<>

ಎಚ್‌ಎಎಲ್ ನಿರ್ಮಿತ ಲಘು ಯುದ್ಧ ವಿಮಾನ ಹಾಗೂ ನಾಗರಿಕ ಹೆಲಿಕಾಪ್ಟರ್‌ಗಳನ್ನು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಬೆಂಗಳೂರಿನಲ್ಲಿಂದು ಭಾರತೀಯ ವಾಯುಪಡೆ ಮತ್ತು ಪವನ್ ಹನ್ಸ್ ಸಂಸ್ಥೆಗೆ ಹಸ್ತಾಂತರಿಸಿದರು. ಎರಡು ತೇಜಸ್ ತರಬೇತಿ ವಿಮಾನಗಳು ಹಾಗೂ ಮೊದಲ ಎಫ್‌ಟಿಟಿ ೪೦ ತರಬೇತಿ ವಿಮಾನವನ್ನು ವಾಯುಪಡೆಗೆ ಹಸ್ತಾಂತರಿಸಿದರು. ಇದೇ ವೇಳೆ, ದ್ರುವ್ ಎನ್ ಜಿ ಹೆಲಿಕಾಪ್ಟರ್‌ಗಳನ್ನು ಪವನ್ ಹನ್ಸ್ ಸಂಸ್ಥೆಗೆ ನೀಡಿದರು. ನಾಗರಿಕ ವಿಮಾನಯಾನ ವಲಯಕ್ಕೆ ಸೇರ್ಪಡೆಯಾಗುತ್ತಿರುವ ದ್ರುವ್ ಎನ್‌ಜಿ, ಎ.ಎಸ್-೪ ನಿಯಮಾವಳಿಗಳಿಗೆ ಅನುಗುಣವಾಗಿ ಭಾರತದಲ್ಲೇ ಸಂಪೂರ್ಣ ದೇಶೀಯವಾಗಿ ನಿರ್ಮಾಣಗೊಂಡ ಮೊದಲ ನಾಗರಿಕ ಹೆಲಿಕಾಪ್ಟರ್ ಆಗಿದೆ. ಇದೇ ವೇಳೆ ಮಾತನಾಡಿದ ರಕ್ಷಣಾ ಸಚಿವ ರಾಜನಾಥ್ ಸಿಂಗ್, ಈ ಸಾಧನೆ, ಭಾರತದ ಏರೋಸ್ಪೇಸ್ ಕ್ಷೇತ್ರದಲ್ಲಿನ ತಾಂತ್ರಿಕ ಹಾಗೂ ಆತ್ಮನಿರ್ಭರತೆಯ ಜೊತೆಗೆ ಪ್ರಗತಿಪಥದ ಮಹತ್ವದ ಮೈಲಿಗಲ್ಲು ಎಂದು ಬಣ್ಣಿಸಿದರು. ಪ್ರಧಾನಿ ನರೇಂದ್ರ ಮೋದಿ ನೇತೃತ್ವದಲ್ಲಿ ಆತ್ಮನಿರ್ಭರ ಭಾರತದ ಮೂಲ ಮಂತ್ರದ ಮೂಲಕ ಈ ಸಾಧನೆ ಮಾಡಲಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ಪ್ರಸ್ತುತ ದಿನಗಳಲ್ಲಿ ಯುದ್ಧ ತಂತ್ರಜ್ಞಾನ ಬದಲಾಗುತ್ತಿದ್ದು, ವಾಯುಪಡೆಯನ್ನು ಮತ್ತಷ್ಟು ಅಭಿವೃದ್ಧಿಗೊಳಿಸುವ ಅಗತ್ಯವಿದೆ ಎಂದು ಪ್ರತಿಪಾದಿಸಿದ್ದಾರೆ. ಇದೇ ವೇಳೆ ಈ ಲಘು ಯುದ್ಧ ವಿಮಾನ ಹಾಗೂ ನಾಗರಿಕ ಹೆಲಿಕಾಪ್ಟರ್‌ಗಳನ್ನು ನಿರ್ಮಿಸಿದ ತಂತ್ರಜ್ಞರಿಗೆ ಹಾಗೂ ಸಿಬ್ಬಂದಿಗೆ ರಾಜನಾಥ್ ಸಿಂಗ್ ಅಭಿನಂದನೆ ಸಲ್ಲಿಸಿದರು.

<>><><*><><<>

ಜೀವವೈವಿಧ್ಯದ ಸಂರಕ್ಷಣೆ ಮತ್ತು ಸಸ್ಯ ತಳಿ ಸಂಪನ್ಮೂಲಗಳ ಸುಸ್ಥಿರ ಬಳಕೆಯು ವಿಕಸಿತ ಭಾರತದ ನಿರ್ಮಾಣಕ್ಕೆ ಅತ್ಯಂತ ನಿರ್ಣಾಯಕವಾಗಿದೆ ಎಂದು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ತಿಳಿಸಿದ್ದಾರೆ. ಬೆಂಗಳೂರಿನ ಹೆಸರಘಟ್ಟದಲ್ಲಿರುವ ಭಾರತೀಯ ಕೃಷಿ ಸಂಶೋಧನಾ ಮಂಡಳಿ ಅಧೀನದ ಭಾರತೀಯ ತೋಟಗಾರಿಕಾ ಸಂಶೋಧನಾ ಸಂಸ್ಥೆಯಲ್ಲಿ ಆಯೋಜಿಸಿದ್ದ "ಭಾರತದ ಪರ್ಯಾಯ ದ್ವೀಪದ ಸಸ್ಯ ತಳಿ ಸಂಪನ್ಮೂಲಗಳನ್ನು ಬಳಸಿಕೊಳ್ಳುವುದು - ಜೀವವೈವಿಧ್ಯ ತಾಣದಿಂದ ಸುಸ್ಥಿರ ಜೈವಿಕ ಸಂಪನ್ಮೂಲ ಕೇಂದ್ರದವರೆಗೆ" ಎಂಬ ರಾಷ್ಟ್ರೀಯ ವಿಚಾರ ಸಂಕಿರಣದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಅವರು ಮಾತನಾತಡಿದರು. ಇಂದು ನಿರ್ಲಕ್ಷ್ಯಕ್ಕೊಳಗಾಗಿರುವ ಸ್ಥಳೀಯ ಬೆಳೆ ಪ್ರಭೇದಗಳೇ ನಾಳೆಯ ಹವಾಮಾನ-ಸಹಿಷ್ಣು, ರೋಗ-ನಿರೋಧಕ ಹಾಗೂ ಪೌಷ್ಟಿಕಾಂಶಯುಕ್ತ ಬೆಳೆಗಳಾಗುವ ಸಾಮರ್ಥ್ಯ ಹೊಂದಿದೆ. ಇಂದು ಸಂರಕ್ಷಿಸುವ ಬೀಜಗಳೇ ಭವಿಷ್ಯದ ಆಹಾರ ಭದ್ರತೆಗೆ ಭದ್ರ ಅಡಿಪಾಯವಾಗಲಿವೆ ಎಂದು ಅಭಿಪ್ರಾಯಪಟ್ಟಿದ್ದಾರೆ.

<>><><*><><<>

ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದು ರಾಜ್ಯ ಪ್ರವಾಸ ಕೈಗೊಳ್ಳಲಿದ್ದಾರೆ. ಇಂದು ಹುಬ್ಬಳ್ಳಿಯ ವಿಮಾನ ನಿಲ್ದಾಣಕ್ಕೆ ಆಗಮಿಸಲಿರುವ ಅವರು ನಗರದ ಖಾಸಗಿ ಹೋಟೆಲ್‌ನಲ್ಲಿ ವಾಸ್ತವ್ಯ ಹೂಡಲಿದ್ದಾರೆ. ನಾಳೆ ಹುಬ್ಬಳ್ಳಿಯ ಗಬ್ಬೂರು ಬೈಪಾಸ್ ಬಳಿ ನೂತನವಾಗಿ ನಿರ್ಮಿಸಲಾಗಿರುವ ಕೆ.ಎಲ್.ಇ ಸಂಸ್ಥೆಯ ೧ ಸಾವಿರದ ೫೦೦ ಹಾಸಿಗೆಗಳ ಹೈಟೆಕ್ ಆಸ್ಪತ್ರೆ ಹಾಗೂ ನೂತನ ವೈದ್ಯಕೀಯ ಮಹಾವಿದ್ಯಾಲಯದ ಕಟ್ಟಡವನ್ನು ಉದ್ಘಾಟಿಸಲಿದ್ದಾರೆ. ಬಳಿಕ ಬೆಳಗಾವಿ ಜಿಲ್ಲೆಯ ಚಿಕ್ಕೋಡಿ ತಾಲೂಕಿನ ಯಕ್ಸಂಬಾ ಗ್ರಾಮಕ್ಕೆ ಭೇಟಿ ನೀಡಲಿರುವ ಅವರು, ಬೀರೇಶ್ವರ ಕೋ-ಆಪರೇಟಿವ್ ಕ್ರೆಡಿಟ್ ಸೊಸೈಟಿಯ ನೂತನ ಕಟ್ಟಡವನ್ನು ಲೋಕಾರ್ಪಣೆಗೊಳಿಸಲಿದ್ದಾರೆ.

<>><><*><><<>

ಪ್ರಧಾನಿ ನರೇಂದ್ರ ಮೋದಿ ಅವರು ನಾಳೆ ನಡೆಯಲಿರುವ ೧೦ನೇ 'ರೋಜ್‌ಗಾರ್ ಮೇಳ'ದಲ್ಲಿ ವಿವಿಧ ಸರ್ಕಾರಿ ಇಲಾಖೆಗಳು ಮತ್ತು ಸಂಸ್ಥೆಗಳಲ್ಲಿ ಹೊಸದಾಗಿ ನೇಮಕಗೊಂಡ ಯುವಜನರಿಗೆ ವಿಡಿಯೋ ಕಾನ್ಫರೆನ್ಸ್ ಮೂಲಕ ೫೧ ಸಾವಿರಕ್ಕೂ ಹೆಚ್ಚು ನೇಮಕಾತಿ ಪತ್ರಗಳನ್ನು ವಿತರಿಸಲಿದ್ದಾರೆ. ಈ ರೋಜ್‌ಗಾರ್ ಮೇಳವು ದೇಶಾದ್ಯಂತ ೪೫ ಸ್ಥಳಗಳಲ್ಲಿ ನಡೆಯಲಿದೆ. ಬೆಂಗಳೂರಿನ ಜಾಲಹಳ್ಳಿಯಲ್ಲಿ ಕೇಂದ್ರ ಭಾರಿ ಕೈಗಾರಿಕೆ ಮತ್ತು ಉಕ್ಕು ಸಚಿವ ಎಚ್.ಡಿ. ಕುಮಾರಸ್ವಾಮಿ ಭಾಗವಹಿಸಲಿದ್ದಾರೆ. ಬೆಂಗಳೂರಿನ ಕ್ವೀನ್ಸ್ ರಸ್ತೆಯಲ್ಲಿರುವ ಕಾವೇರಿ ಹಾಲ್‌ನಲ್ಲಿ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಪಾಲ್ಗೊಳ್ಳಲಿದ್ದಾರೆ.

<>><><*><><<>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ಸಾರ್ವಜನಿಕ ಸೇವೆಯಲ್ಲಿ ೨೫ ವರ್ಷ ಪೂರ್ಣಗೊಳಿಸಿದ ಹಿನ್ನೆಲೆಯಲ್ಲಿ ದೇಶಾದ್ಯಂತ ಸೇವಾ ಸಂಕಲ್ಪ ಅಭಿಯಾನ ಹಮ್ಮಿಕೊಳ್ಳಲಾಗಿದೆ. ಇದರ ಭಾಗವಾಗಿ ಭಾಗವಾಗಿ ಹಲವು ವಲಯಗಳಲ್ಲಿ ಕೈಗೊಂಡ ಮಹತ್ವದ ಸುಧಾರಣೆಗಳ ಕುರಿತ ಸರಣಿಯನ್ನು ಆಕಾಶವಾಣಿ ಪ್ರಸಾರ ಮಾಡುತ್ತಿದೆ. ಈಗ ಇಂಡಿಯಾ ಸೆಮಿಕಂಡಕ್ಟರ್ ಮಿಷನ್ - ೨೦೨೧ರ ಕುರಿತ ಒಂದು ನೋಟ. ಇಂಡಿಯಾ ಸೆಮಿಕಂಡಕ್ಟರ್ ಮಿಷನ್ ಅಡಿಯಲ್ಲಿ ಈ ಯೋಜನೆಯಡಿಯಲ್ಲಿ ಇಲ್ಲಿಯವರೆಗೆ ಸುಮಾರು ೧.೬ ಲಕ್ಷ ಕೋಟಿ ರೂಪಾಯಿ ಮೌಲ್ಯದ ೧೦ ಪ್ರಮುಖ ಯೋಜನೆಗಳಿಗೆ ಅನುಮೋದನೆ ನೀಡಲಾಗಿದ್ದು, ಇವುಗಳಲ್ಲಿ ಎರಡು ಚಿಪ್ ತಯಾರಿಕಾ ಘಟಕಗಳು ಹಾಗೂ ಎಂಟು ಪ್ಯಾಕೇಜಿಂಗ್ ಘಟಕಗಳು ಸೇರಿವೆ. ಈ ಪೈಕಿ ನಾಲ್ಕು ಘಟಕಗಳಲ್ಲಿ ಈಗಾಗಲೇ ಪ್ರಾಯೋಗಿಕ ಉತ್ಪಾದನೆ ಪ್ರಾರಂಭವಾಗಿದೆ. ದೇಶದ ಒಟ್ಟು ಸೆಮಿಕಂಡಕ್ಟರ್

ಕಂಪನಿಗಳಲ್ಲಿ ಶೇಕಡ ೧ಲಕ್ಕಿಂತ ಹೆಚ್ಚು ಬೆಂಗಳೂರಿನಲ್ಲೇ ನೆಲೆಯೂರಿವೆ. ಬೆಂಗಳೂರಿನಲ್ಲಿ ಸುಮಾರು ೬೨೬ ಸೆಮಿಕಂಡಕ್ಟರ್ ಸಂಬಂಧಿತ ಕಂಪನಿಗಳಿವೆ. ಭಾರತದ ಸೆಮಿಕಂಡಕ್ಟರ್ ಇಕ್ವಿಟಿ ನಿಧಿಯಲ್ಲಿ ಬೆಂಗಳೂರು ಸುಮಾರು ಶೇಕಡ ೪೦.೧ರಷ್ಟು ಪಾಲನ್ನು ಹೊಂದಿದೆ. ಚಿಪ್ ವಿನ್ಯಾಸ, ಸಂಶೋಧನೆ ಮತ್ತು ಅಭಿವೃದ್ಧಿ ಹಾಗೂ ಪರೀಕ್ಷಾ ಕೇಂದ್ರಗಳಿಗೆ ದೇಶದಲ್ಲಿ ಬೆಂಗಳೂರು ಖ್ಯಾತಿ ಗಳಿಸಿದೆ.

<><><*><><>

ಬೀದಿ ಬದಿ ವ್ಯಾಪಾರಿಗಳಿಂದ ಪಾದಚಾರಿ ಮಾರ್ಗಗಳು ಮರು ಒತ್ತುವರಿಯಾಗದಂತೆ ನಿರಂತರವಾಗಿ ನಿಗಾ ವಹಿಸಬೇಕು ಎಂದು ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಒಂದು ವೇಳೆ ವ್ಯಾಪಾರಿಗಳು ಒತ್ತುವರಿಗೆ ಮುಂದಾದರೆ ಅವರ ವಸ್ತುಗಳನ್ನು ವಶಕ್ಕೆ ಪಡೆದು ದಂಡ ವಿಧಿಸಬೇಕು ಎಂದು ತಿಳಿಸಿದ್ದಾರೆ. ಅಧಿಕಾರಿಗಳೊಂದಿಗೆ ವರ್ಚುವಲ್ ಸಭೆಯಲ್ಲಿ ಮಾತನಾಡಿದ ಅವರು, ಶಿಸ್ತಿನ ಕಾರ್ಯಾಚರಣೆಯ ಪರಿಣಾಮ ಈಗಾಗಲೇ ಐದೂ ಪಾಲಿಕೆಯ ವ್ಯಾಪ್ತಿಯಲ್ಲಿ ಒಟ್ಟಾರೆಯಾಗಿ ೧ ಸಾವಿರದ ೩೭೩ ಕಿಲೋಮೀಟರ್ ರಸ್ತೆಯಲ್ಲಿ ಒತ್ತುವರಿ ತೆರವುಗೊಳಿಸಿ, ಪಾದಾಚಾರಿಗಳ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಲಾಗಿದೆ ಎಂದು ಅಧಿಕಾರಿಗಳ ಕಾರ್ಯವನ್ನು ಶ್ಲಾಘಿಸಿದ್ದಾರೆ. ಮರು ಒತ್ತುವರಿ ಪ್ರಕರಣಗಳನ್ನು ತಕ್ಷಣ ಗುರುತಿಸಿ, ಫೋಟೋ ಹಾಗೂ ಜಿಯೋ-ಟ್ಯಾಗ್ ಮಾಹಿತಿಯೊಂದಿಗೆ ವರದಿ ಮಾಡುವ ವ್ಯವಸ್ಥೆ ಮಾಡಬೇಕು. ಮಾರ್ಷಲ್‌ಗಳು ಹಾಗೂ ಬೀಟ್ ಪೊಲೀಸ್ ಸಿಬ್ಬಂದಿ ಜಂಟಿಯಾಗಿ ನಿಯಮಿತವಾಗಿ ಪರಿಶೀಲನೆ ನಡೆಸಬೇಕು ಎಂದು ನಿರ್ದೇಶನ ನೀಡಿದ್ದಾರೆ.

<><><*><><>

ಸಂಕ್ಷಿಪ್ತ ಸುದ್ದಿ-

೧. ಚಿಕ್ಕಮಗಳೂರು ಜಿಲ್ಲೆಯ ತರೀಕೆರೆ ತಾಲೂಕು ಲಕ್ಕವಳ್ಳಿ ವಲಯದಲ್ಲಿ ಕಡವೆ ಭೇಟೆಯಾಡಿದ ಮೂವರು ಆರೋಪಿಗಳನ್ನು ಅರಣ್ಯ ಇಲಾಖೆ ಸಿಬ್ಬಂದಿ ದಾಳಿ ನಡೆಸಿ ಬಂಧಿಸಿದ್ದಾರೆ.

೨. ಬೆಂಗಳೂರು ನಗರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿಯ ೨೦೨೬-೨೭ನೇ ಸಾಲಿನ ಸರ್ವ ಸದಸ್ಯರ ಸಭೆ ಹಾಗೂ ಬಾಲ ಮತ್ತು

ಕಿಶೋರ ಕಾರ್ಮಿಕ ಪದ್ಧತಿ ನಿರ್ಮೂಲನೆಗೆ ಸಂಬಂಧಿಸಿದ ಜಿಲ್ಲಾ ಮಟ್ಟದ ಕಾರ್ಯಪಡೆ ಸಮಿತಿ ಸಭೆ ನಡೆಯಿತು.

<>><>< ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು ><><<>

<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ ><><<>